154 ನಿಲ್ಲ ನಿ=330

09

# ಕರ್ನಾಟಕ ವಿಧಾನ ಪರಿಷತ್ತು

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ ಇವರು "ರಾಜ್ಯದಲ್ಲಿರುವ ಮಾಜಿ ಸೈನಿಕರಿಗೆ ಭೂ ಮಂಜೂರಾತಿಯಲ್ಲಿ ಆಗುತ್ತಿರುವ ಅನಗತ್ಯ ವಿಳಂಬದ ಬಗ್ಗೆ ನಿಯಮ 330ರ ಅಡಿ ಮಾನ್ಯ ಕಂದಾಯ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ " ನಿಯಮ 330ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಕಂದಾಯ ಸಚಿವರ ಹೇಳಿಕೆ:

*****

ಸೈನಿಕ / ಮಾಜಿ ಸೈನಿಕರಿಗೆ ಜಮೀನು/ನಿವೇಶನ ಮಂಜೂರಾತಿಗಾಗಿ ಸಲ್ಲಿಕೆಯಾಗುವ ಅರ್ಜಿಗಳನ್ನು ಇತ್ಯರ್ಥಗೊಳಿಸಲು ಈ ಕೆಳಕಂಡ ಕ್ರಮಗಳನ್ನು ಅನುಸರಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸರ್ಕಾರದ ಪತ್ರ ಸಂಖ್ಯೆ ಆರ್ ಡಿ 26 ಎಲ್‌ಜಿಪಿ 2020, ದಿನಾಂಕ: 20.09.2024 ರಂದು ಸೂಚನೆಗಳನ್ನು ನೀಡಲಾಗಿದೆ.

1. ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 8(8)ರನ್ವಯ ಸೈನಿಕ/ಮಾಜಿ ಸೈನಿಕರಿಗೆ ಅವರ ಸೇವಾ ರಿಜಿಸ್ಟರ್‌ನಲ್ಲಿ ನಮೂದಿಸಿರುವ ಸ್ಥಳೀಯ ತಾಲ್ಲೂಕಿನಲ್ಲಿ ಅಥವಾ ಸಂಬಂಧಪಟ್ಟ ಜಿಲ್ಲೆಯಲ್ಲಿ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ (3)ರಡಿ ಪ್ರಕಟಿಸಿರುವ ಭೂ ಲಭ್ಯತಾ ಪಟ್ಟಿಯಂತೆ ಸರ್ಕಾರಿ ಜಮೀನು ಲಭ್ಯವಿದ್ದಲ್ಲಿ, ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮಗಳನ್ವಯ ಉಚಿತವಾಗಿ ಮಂಜೂರು ಮಾಡಲು ನಿಯಮಾನುಸಾರ ಕ್ರಮವಹಿಸುವುದು.

2. ಸೈನಿಕ/ಮಾಜಿ ಸೈನಿಕರಿಗೆ ಅವರ ಸೇವಾ ರಿಜಿಸ್ಟರ್‌ನಲ್ಲಿ ನಮೂದಿಸಿರುವ ಸ್ಥಳೀಯ ತಾಲ್ಲೂಕಿನಲ್ಲಿ ಜಮೀನು ಲಭ್ಯವಿಲ್ಲದಿದ್ದಲ್ಲಿ ಅರ್ಜಿಯನ್ನು ಅದೇ ಜಿಲ್ಲೆಯ ಯಾವುದಾದರೂ ತಾಲ್ಲೂಕಿಗೆ ಮಾತ್ರ ವರ್ಗಾಯಿಸಲು ನಿಯಮ 8(8)ರಡಿ ಅವಕಾಶ ಕಲ್ಪಿಸಲಾಗಿದೆ. ಆದ್ದರಿಂದ ಜಿಲ್ಲಾಧಿಕಾರಿಯವರು ಸಂಬಂಧಪಟ್ಟ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಯಾವುದಾದರು ತಾಲ್ಲೂಕಿನಲ್ಲಿ ಮಂಜೂರಾತಿಗಾಗಿ ಜಮೀನು ಲಭ್ಯವಿದ್ದಲ್ಲಿ ಮಂಜೂರು ಮಾಡಲು ಕ್ರಮವಹಿಸುವುದು.

3. ಒಂದು ವೇಳೆ ಅರ್ಜಿದಾರರು ಕೋರಿರುವ ಜಿಲ್ಲೆಯಲ್ಲಿ ಸರ್ಕಾರಿ ಜಮೀನು ಲಭ್ಯವಿಲ್ಲದ ಪಕ್ಷದಲ್ಲಿ ಬೆಂಗಳೂರು ನಗರ ಜಿಲ್ಲೆಯನ್ನು ಹೊರತುಪಡಿಸಿ, ನಗರ ಪ್ರದೇಶದಲ್ಲಿ 1200 ಚದರ ಅಡಿ ವಿಸ್ತೀರ್ಣದ ನಿವೇಶನವನ್ನು ಅಥವಾ ಗ್ರಾಮೀಣ ಪ್ರದೇಶದಲ್ಲಿ 2400 ಚದರ ಅಡಿ ವಿಸ್ತೀರ್ಣದ ನಿವೇಶನವನ್ನು ಜಾರಿಯಲ್ಲಿರುವ ಸರ್ಕಾರದ ಯಾವುದೇ ವಸತಿ ಯೋಜನೆಯಡಿಯಲ್ಲಿ ಅಥವಾ ಸರ್ಕಾರವು

ರೂಪಿಸಬಹುದಾದ ಯಾವುದೇ ವಿಶೇಷ ಯೋಜನೆಯಡಿಯಲ್ಲಿ ನಿವೇಶನವನ್ನು ಮಂಜೂರು ಮಾಡಲು ನಿಯಮಾನುಸಾರ ಕ್ರಮವಹಿಸುವುದು.

4. ಬೆಂಗಳೂರು ನಗರ ಜಿಲ್ಲೆಯಲ್ಲಿ ಸೈನಿಕ/ಮಾಜಿ ಸೈನಿಕರಿಗೆ ಜಮೀನು / ನಿವೇಶನ ಮಂಜೂರು ಮಾಡಲು ಅವಕಾಶವಿಲ್ಲದೇ ಇರುವುದರಿಂದ ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಪಟ್ಟ ಸೈನಿಕ / ಮಾಜಿ ಸೈನಿಕರ ಅರ್ಜಿಗಳನ್ನು ಮಾತ್ರ ಪಕ್ಕದ ಜಿಲ್ಲೆಗೆ ವರ್ಗಾಯಿಸುವಾಗ ಅರ್ಜಿದಾರರು ಇಚ್ಛಿಸಿದ ಬೆಂಗಳೂರು ಜಿಲ್ಲೆಗೆ ಹೊಂದಿಕೊಂಡಂತೆ ಇರುವ ಪಕ್ಕದ ಜಿಲ್ಲೆಗೆ ಅರ್ಜಿಯನ್ನು ವರ್ಗಾಯಿಸುವುದು. ಪಕ್ಕದ ಜಿಲ್ಲೆಯಲ್ಲಿ ಸರ್ಕಾರಿ ಜಮೀನು ಲಭ್ಯವಿದ್ದಲ್ಲಿ ಜಿಲ್ಲಾಧಿಕಾರಿಯವರು ನಿಯಮಾನುಸಾರ ಜಮೀನನ್ನು ಮಂಜೂರು ಮಾಡುವುದು. ಒಂದುವೇಳೆ ಜಮೀನು ಲಭ್ಯವಿಲ್ಲದಿದ್ದಲ್ಲಿ, ನಿವೇಶನ ಮಂಜೂರು ಮಾಡಲು ಕ್ರಮವಹಿಸುವುದು. ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಪಟ್ಟ ಅರ್ಜಿಗಳನ್ನು ಮಾತ್ರ ಪಕ್ಕದ ಜಿಲ್ಲೆಗೆ ವರ್ಗಾಯಿಸಲು ಅವಕಾಶವಿದೆ. ಉಳಿದ ಇತರ ಜಿಲ್ಲೆಯ ಅರ್ಜಿಗಳನ್ನು ಪಕ್ಕದ ಜಿಲ್ಲೆಗೆ ವರ್ಗಾಯಿಸಲು ಅವಕಾಶವಿರುವುದಿಲ್ಲ.

ಸಂಖ್ಯೆ: ಆರ್‌ಡಿ 4 ಎಲ್‌ಜಿಕ್ಯೂ 2025

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು